All India Radio: Bangalore
National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

13.02.2026 1.10 p.m.

<><><><>

ಮುಖ್ಯಾಂಶಗಳು

- ಲೋಕಸಭೆಯಲ್ಲಿ ಮುಂದುವರಿದ ಪ್ರತಿಪಕ್ಷಗಳ ಗದ್ದಲ : ಮಾರ್ಚ್ ೯ಕ್ಕೆ ಕಲಾಪ ಮುಂದೂಡಿಕೆ
- ನವದೆಹಲಿಯಲ್ಲಿಂದು ಸೇವಾತೀರ್ಥ ಕಟ್ಟಡ ಸಂಕೀರ್ಣದ ನಾಮಕರಣ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗಿ
- ಇಂದು ವಿಶ್ವ ರೇಡಿಯೋ ದಿನ; ಬಾನುಲಿಯ ಪ್ರಸ್ತುತತೆ ಮನವರಿಕೆ ಮಾಡಿದ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್
- ಬ್ಯಾಂಕಾಕ್‌ನಲ್ಲಿಂದು ಮಹಿಳಾ ಏಷ್ಯಾ ಕಪ್ ರೈಸಿಂಗ್ ಸ್ಟಾರ್ಸ್ ಕ್ರಿಕೆಟ್ ಪಂದ್ಯಾವಳಿ ಆರಂಭ
- ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್; ದಿನದ ಮೊದಲ ಪಂದ್ಯದಲ್ಲಿ ಆಸ್ಟ್ರೇಲಿಯಾಗೆ ೧೭೦ ರನ್ ಗಳ ಗುರಿ ನೀಡಿದ ಜಿಂಬಾಬ್ವೆ

<><><><>

ಲೋಕಸಭೆಯಿಂದು ಸಮಾವೇಶಗೊಂಡಾಗ ಪೀಠಾಸೀನಾಧಿಕಾರಿ ಸಂಧ್ಯಾ ರೇ ಜನವರಿ ೨೧ರಂದು ನಿಧನರಾದ ಮಾಜಿ ಸಂಸದ ಭಗವಾನ್ ದಾಸ್ ರಾಥೋಡ್ ಅವರ ನಿಧನದ ಕುರಿತು ಸಂತಾಪ ಸೂಚಕ ನಿರ್ಣಯ ಮಂಡಿಸಿದರು. ಅಗಲಿದ ನಾಯಕನಿಗೆ ಗೌರವ ಸಲ್ಲಿಸಲು ಸದನ ಮೌನ ಆಚರಿಸಿತು. ಬಳಿಕ ಪ್ರಶ್ನೋತ್ತರ ಅವಧಿಯನ್ನು ಕೈಗೆತ್ತಿಕೊಳ್ಳಲಾಯಿತು. ಈ ವೇಳೆ ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ಕೊಡೈನ್ ಆಧಾರಿತ ಕೆಮ್ಮಿನ ಸೇವನೆಯಿಂದ ಉಂಟಾದ ಸಾವುಗಳ ಕುರಿತು ಕೇಳಿದ ಪ್ರಶ್ನೆಗಳಿಗೆ ಉತ್ತರಿಸಲು ಪ್ರಯತ್ನಿಸಿದರು. ಈ ವೇಳೆ ಪ್ರತಿಪಕ್ಷಗಳ ಸದಸ್ಯರು ವಿವಿಧ ವಿಷಯಗಳನ್ನು ಮುಂದಿಟ್ಟುಕೊಂಡು ಗದ್ದಲ ಎಬ್ಬಿಸಿದರು. ಕಾಂಗ್ರೆಸ್, ಟಿಎಂಸಿ, ಡಿಎಂಕೆ ಸೇರಿದಂತೆ ಪ್ರತಿಪಕ್ಷ ಸದಸ್ಯರು ಸದನದ ಬಾವಿಗಿಳಿದು ಘೋಷಣೆ ಕೂಗಲಾರಂಭಿಸಿದರು. ಈ ವೇಳೆ ಪೀಠಾಸೀನ ಅಧಿಕಾರಿ ಇತರ ಸದಸ್ಯರು ಮಾತನಾಡಲು ಸಾಧ್ಯವಾಗುವಂತೆ ಸದನವನ್ನು ಕಾರ್ಯರೂಪಕ್ಕೆ ತರಲು ಪ್ರತಿಭಟನಾ ನಿರತ ಸದಸ್ಯರಿಗೆ ಆಗ್ರಹಿಸಿದರು. ಮನವಿಯ ಹೊರತಾಗಿಯೂ ಗದ್ದಲ ಮುಂದುವರಿದ ಹಿನ್ನೆಲೆ ಸದನವನ್ನು ೧೨ ಗಂಟೆಯವರೆಗೆ ಮುಂದೂಡಲಾಯಿತು. ೧೨ ಗಂಟೆಗೆ ಸದನ ಪುನಃ ಸಮಾವೇಶಗೊಂಡಾಗ ಸದಸ್ಯರು ವಿವಿಧ

ಸಚಿವಾಲಯಗಳ ಅಧಿಕೃತ ದಾಖಲೆಗಳನ್ನು ಮಂಡಿಸಿದರು. ಬಳಿಕ ಕಲಾಪವನ್ನು ಮಾರ್ಚ್ ೯ ಬೆಳಗ್ಗೆ ೧೧ ಗಂಟೆವರೆಗೆ ಮುಂದೂಡಲಾಗಿದೆ.

<><><>

ಪ್ರಸ್ತುತ ನಡೆಯುತ್ತಿರುವ ಬಜೆಟ್ ಅಧಿವೇಶನದ ಮೊದಲ ಹಂತದ ಕೊನೆಯ ದಿನವಾದ ಇಂದು ರಾಜ್ಯಸಭೆಯಲ್ಲಿ ಸದಸ್ಯರು ವಿವಿಧ ಅಧಿಕೃತ ದಾಖಲೆಗಳನ್ನು ಮಂಡಿಸಿದರು. ಕಲಾಪದ ಆರಂಭದಲ್ಲಿ ರಾಜ್ಯ ಸಭಾಪತಿ ಸಿ.ಪಿ. ರಾಧಾಕೃಷ್ಣನ್, ರಾಷ್ಟ್ರಪತಿ ಅವರಿಂದ ಸ್ವೀಕರಿಸಿದ ಸಂದೇಶವನ್ನು ಸದನಕ್ಕೆ ಓದಿ ತಿಳಿಸಿದರು. ಜನವರಿ ೨೮ರಂದು ಸಂಸತ್ತಿನ ಉಭಯ ಸದನಗಳನ್ನುದ್ದೇಶಿಸಿ, ತಾವು ಮಾಡಿದ ಭಾಷಣಕ್ಕಾಗಿ ರಾಜ್ಯಸಭಾ ಸದಸ್ಯರು ಸಲ್ಲಿಸಿದ ವಂದನಾ ನಿರ್ಣಯವನ್ನು ಸ್ವೀಕರಿಸಿರುವುದಾಗಿ ರಾಷ್ಟ್ರಪತಿ ಅವರು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ. ಬಳಿಕ ಶೂನ್ಯವೇಳೆ ಕಲಾಪವನ್ನು ಕೈಗೆತ್ತಿಕೊಳ್ಳಲಾಯಿತು. ಈ ವೇಳೆ ರಾಜ್ಯ ಸಭಾಪತಿ ಸಿ.ಪಿ. ರಾಧಾಕೃಷ್ಣನ್ ಅವರ ವಿಶೇಷ ಅನುಮತಿಯೊಂದಿಗೆ ವಿವಿಧ ರಾಜಕೀಯ ಪಕ್ಷಗಳ ಸದಸ್ಯರು ತುರ್ತು ಸಾರ್ವಜನಿಕ ಪ್ರಾಮುಖ್ಯತೆಯುಳ್ಳ ವಿಷಯಗಳ ಪ್ರಸ್ತಾಪಿಸಿ ಸದನದ ಗಮನ ಸೆಳೆದರು.

<><><>

ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯಲ್ಲಿಂದು ಸೇವಾ ತೀರ್ಥ ಕಟ್ಟಡ ಸಂಕೀರ್ಣದ ಹೆಸರನ್ನು ಅನಾವರಣಗೊಳಿಸಲಿದ್ದಾರೆ. ನಂತರ ಪ್ರಧಾನಿ, ಸೇವಾ ತೀರ್ಥ ಹಾಗೂ ಕರ್ತವ್ಯ ಭವನ -೧ ಮತ್ತು ೨ಅನ್ನು ಔಪಚಾರಿಕವಾಗಿ ಉದ್ಘಾಟಿಸಲಿದ್ದಾರೆ. ಬಳಿಕ ಸಂಜೆ ಅವರು, ಸೇವಾ ತೀರ್ಥದಲ್ಲಿ ಸಾರ್ವಜನಿಕ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಈ ಉದ್ಘಾಟನೆಯು ಆಧುನಿಕ, ದಕ್ಷ, ಪ್ರವೇಶಿಸಬಹುದಾದ ಮತ್ತು ನಾಗರಿಕ ಕೇಂದ್ರಿತ ಆಡಳಿತ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವ ಪ್ರಧಾನಿ ನರೇಂದ್ರ ಮೋದಿಯವರ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. ಸೇವಾ ತೀರ್ಥವು ಪ್ರಧಾನ ಮಂತ್ರಿ ಕಚೇರಿ, ರಾಷ್ಟ್ರೀಯ ಭದ್ರತಾ ಮಂಡಳಿ ಸಚಿವಾಲಯ, ಕ್ಯಾಬಿನೆಟ್ ಸಚಿವಾಲಯವನ್ನು ಹೊಂದಿದೆ, ಹೊಸ ಕಟ್ಟಡ ಸಂಕೀರ್ಣಗಳು ಆಡಳಿತಾತ್ಮಕ ಕಾರ್ಯಗಳನ್ನು, ಆಧುನಿಕ ಮತ್ತು ಭವಿಷ್ಯಕ್ಕೆ ಸಿದ್ಧವಾಗಿರುವ ಸೌಲಭ್ಯಗಳಲ್ಲಿ ಒಟ್ಟುಗೂಡಿಸುತ್ತವೆ. ಕರ್ತವ್ಯ ಭವನ -೧ ಮತ್ತು ೨ ಹಣಕಾಸು ಸಚಿವಾಲಯ, ರಕ್ಷಣಾ ಸಚಿವಾಲಯ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ, ಶಿಕ್ಷಣ ಸಚಿವಾಲಯ ಮತ್ತು ಮಾಹಿತಿ ಮತ್ತು ಪ್ರಸಾರ ಸಚಿವಾಲಯ ಸೇರಿದಂತೆ ಹಲವಾರು ಪ್ರಮುಖ ಸಚಿವಾಲಯಗಳನ್ನು ಒಳಗೊಂಡಿದೆ. ಎರಡೂ ಕಟ್ಟಡ ಸಂಕೀರ್ಣಗಳು ಡಿಜಿಟಲ್ ಸಂಯೋಜಿತ ಕಚೇರಿಗಳನ್ನು ಹೊಂದಿವೆ. ಈ ವೈಶಿಷ್ಟ್ಯಗಳು ಸಹಯೋಗ, ದಕ್ಷತೆ, ತಡೆರಹಿತ ಆಡಳಿತ, ಸುಧಾರಿತ ನಾಗರಿಕರ ತೊಡಗಿಸಿಕೊಳ್ಳುವಿಕೆ ಮತ್ತು ಉದ್ಯೋಗಿ ಯೋಗಕ್ಷೇಮವನ್ನು ಬೆಳೆಸುತ್ತವೆ. ಕಟ್ಟಡ ಸಂಕೀರ್ಣಗಳು ಸ್ಮಾರ್ಟ್ ಪ್ರವೇಶ ನಿಯಂತ್ರಣ ವ್ಯವಸ್ಥೆಗಳು, ಕಣ್ಗಾವಲು ಜಾಲಗಳು ಮತ್ತು ಸುಧಾರಿತ ತುರ್ತು

ಪ್ರತಿಕ್ರಿಯೆ ಮೂಲಸೌಕರ್ಯದಂತಹ ಸಮಗ್ರ ಸುರಕ್ಷತೆ ಮತ್ತು ಭದ್ರತಾ ಚೌಕಟ್ಟುಗಳನ್ನು ಸಹ ಒಳಗೊಂಡಿವೆ.

<><><>

ಇಂದು ವಿಶ್ವ ರೇಡಿಯೋ ದಿನವನ್ನು ಆಚರಿಸಲಾಗುತ್ತಿದೆ. ೧೯೪೬ರಲ್ಲಿ ವಿಶ್ವಸಂಸ್ಥೆಯ ರೇಡಿಯೋ ಸ್ಥಾಪನೆಯ ಸ್ಮರಣಾರ್ಥ ಪ್ರತಿ ವರ್ಷ ಫೆಬ್ರವರಿ ೧೩ ರಂದು ಈ ದಿನವನ್ನು ಆಚರಿಸಲಾಗುತ್ತದೆ. ಈ ವರ್ಷದ ಧ್ಯೇಯವಾಕ್ಯ "ರೇಡಿಯೋ ಮತ್ತು ಕೃತಕ ಬುದ್ಧಿಮತ್ತೆ; ಎಐ ಒಂದು ಸಾಧನ, ಧ್ವನಿಯಲ್ಲ". ೨೦೨೬ರ ವಿಶ್ವ ರೇಡಿಯೋ ದಿನವನ್ನು ಗುರುತಿಸಲು, ಛತ್ತೀಸ್‌ಗಢದ ಆಕಾಶವಾಣಿ ರಾಯ್‌ಪುರ, ಯುನೆಸ್ಕೋ ಸಹಯೋಗದೊಂದಿಗೆ, ಇಂದು ವಿಶ್ವ ರೇಡಿಯೋ ದಿನದ ಸಮಾವೇಶವನ್ನು ಆಯೋಜಿಸುತ್ತಿದೆ. ಈ ಸಮಾವೇಶವು ಧ್ಯೇಯವಾಕ್ಯವನ್ನು ಕೇಂದ್ರೀಕರಿಸಿದ್ದು, ಸಮಾವೇಶದ ವೇಳೆ ರೇಡಿಯೋ ಪ್ರಸಾರದಲ್ಲಿ ವಿಷಯ ರಚನೆ, ಶ್ರೋತೃಗಳ ತೊಡಗಿಸಿಕೊಳ್ಳುವಿಕೆ ಮತ್ತು ಪ್ರವೇಶಸಾಧ್ಯತೆಯನ್ನು ಕೃತಕ ಬುದ್ಧಿಮತ್ತೆ ಹೇಗೆ ಬಲಪಡಿಸುತ್ತದೆ ಎಂಬುದರ ಕುರಿತು ಚರ್ಚೆ ನಡೆಯಲಿದೆ. ಆಕಾಶವಾಣಿಯು ಆರಂಭದಿಂದಲೂ "ಬಹುಜನ ಹಿತಾಯ, ಬಹುಜನ ಸುಖಾಯ" ಎಂಬ ಧ್ಯೇಯವಾಕ್ಯದೊಂದಿಗೆ ರಾಷ್ಟ್ರಕ್ಕೆ ಸೇವೆ ಸಲ್ಲಿಸುತ್ತಿದೆ. ೧೯೩೬ ರಲ್ಲಿ ಸ್ಥಾಪನೆಯಾಗಿ ಸ್ವಾತಂತ್ರ್ಯದ ನಂತರ ಸಾರ್ವಜನಿಕ ಮಾಲೀಕತ್ವಕ್ಕೆ ಒಳಪಟ್ಟ ಆಕಾಶವಾಣಿ, ಪ್ರಸಾರವಾಗುವ ಭಾಷೆಗಳ ಸಂಖ್ಯೆ ಮತ್ತು ಶ್ರೋತೃಗಳ ವೈವಿಧ್ಯತೆಯ ದೃಷ್ಟಿಯಿಂದ ವಿಶ್ವದ ಅತಿದೊಡ್ಡ ಪ್ರಸಾರ ಸಂಸ್ಥೆಗಳಲ್ಲಿ ಒಂದಾಗಿ ಬೆಳೆದಿದೆ. ಖಾಸಗಿ ಎಫ್‌ಎಂ ರೇಡಿಯೋ ಭಾರತದಾದ್ಯಂತ ನಗರ ಮತ್ತು ಪ್ರಾದೇಶಿಕ ಮನರಂಜನೆ ಮತ್ತು ಮಾಹಿತಿಯನ್ನು ತಲುಪಿಸುವ ಮೂಲಕ ಸಾರ್ವಜನಿಕ ಪ್ರಸಾರಕ್ಕೆ ಪೂರಕವಾಗಿದೆ. ಎಲ್ಲಾ ಬಾನುಲಿ ಶ್ರೋತೃಗಳು ಹಾಗೂ ಪ್ರಸಾರ ಪರಿಸರ ವ್ಯವಸ್ಥೆಯನ್ನು ಬಲಪಡಿಸುತ್ತಿರುವ ಎಲ್ಲರಿಗೂ, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಅನೇಕ ಗಣ್ಯರು ವಿಶ್ವ ರೇಡಿಯೋ ದಿನದ ಶುಭಾಶಯ ಕೋರಿದ್ದಾರೆ. ಸಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಉಪರಾಷ್ಟ್ರಪತಿ, ರೇಡಿಯೋ ಡಿಜಿಟಲ್ ವೇದಿಕೆಗಳು ಮತ್ತು ಪಾಡ್‌ಕಾಸ್ಟ್‌ಗಳ ಮೂಲಕ ವಿಕಸನಗೊಳ್ಳುತ್ತಿರುವಂತೆ ಪೀಳಿಗೆಗಳಾದ್ಯಂತ ಮಾಹಿತಿ ವಿನಿಮಯ ಮಾಡಲು ಸಂಪರ್ಕಿಸಲು ಮತ್ತು ಶ್ರೋತೃಗಳ ಧ್ವನಿಯಾಗಿ ಮುಂದುವರಿದಿದೆ. ಬಾನುಲಿಯ ನಿರಂತರ ಪ್ರಸ್ತುತತೆ ಮತ್ತು ಅದನ್ನು ವೈವಿಧ್ಯಮಯ ಮತ್ತು ಕೈಗೆಟಕುವಂತೆ ಮಾಡುವ ಸಾಮೂಹಿಕ ಪ್ರಯತ್ನಗಳನ್ನು ಆಚರಿಸುವಂತೆ ಜನರಿಗೆ ಕರೆ ನೀಡಿದ್ದಾರೆ. ರೇಡಿಯೋ ದೂರದ ಹಳ್ಳಿಗಳಾಗಲಿ ಅಥವಾ ನಗರ ಪ್ರದೇಶಗಳಾಗಲಿ ಎಲ್ಲೆಡೆ ಜನರ ನಂಬಿಕಸ್ಥ ಧ್ವನಿಯಾಗಿ ಸೇವೆ ಸಲ್ಲಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ತಮ್ಮ ಮಾಸಿಕ ಮನ್ ಕಿ ಬಾತ್ ಕಾರ್ಯಕ್ರಮದ ಮೂಲಕ ತಾವು ರೇಡಿಯೋದ ಸಾಮರ್ಥ್ಯವನ್ನು ಅನುಭವಿಸಿರುವುದಾಗಿ ಪ್ರಧಾನಿ ತಿಳಿಸಿದ್ದಾರೆ.

<><><>

ಭಾರತ ಮತ್ತು ಅಮೆರಿಕ ನಡುವಿನ ಮಧ್ಯಂತರ ವ್ಯಾಪಾರ ಒಪ್ಪಂದವನ್ನು ಕೃಷಿ ವಲಯ ಸ್ವಾಗತಿಸಿದೆ. ಆಕಾಶವಾಣಿಯೊಂದಿಗೆ ಮಾತನಾಡಿರುವ ರಾಷ್ಟ್ರೀಯ ಸರಕು ಮತ್ತು ಉತ್ಪನ್ನಗಳ ವಿನಿಮಯ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕ ಡಾ. ಅರುಣ್ ರಾಸ್ತೆ, ಸಣ್ಣ ರೈತರ ಹಿತಾಸಕ್ತಿಗಳನ್ನು ಕಾಪಾಡಲು ಗೋಧಿ, ಅಕ್ಕಿ, ಡೈರಿ ಮತ್ತು ಕೋಳಿ ಸಾಕಣೆಯಂತಹ ಕೃಷಿ ವಸ್ತುಗಳನ್ನು ಒಪ್ಪಂದದಿಂದ ಹೊರಗಿಡಲಾಗಿದೆ ಎಂದು ಹೇಳಿದರು.

<><><><>

ಕರ್ನಾಟಕದ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ತಾಲೂಕಿನ ಎಂ ಸತ್ಯವರ ಗ್ರಾಮದ ರಾಷ್ಟ್ರೀಯ ಹೆದ್ದಾರಿಯಲ್ಲಿಂದು ಬೆಳಿಗ್ಗೆ ಕಾರು, ಬೈಕ್ ಹಾಗೂ ಕ್ಯಾಂಟರ್ ವಾಹನಗಳ ನಡುವೆ ನಡೆದ ಭೀಕರ ಸರಣಿ ರಸ್ತೆ ಅಪಘಾತದಲ್ಲಿ ೭ ಮಂದಿ ಸ್ಥಳದಲ್ಲಿಯೇ ಸಾವನ್ನಪ್ಪಿರುವ ಘಟನೆ ನಡೆದಿದೆ. ಹೊಸಕೋಟೆ ದಾಬಸ್‌ಪೇಟೆ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಚರಿಸುತ್ತಿದ್ದ ಕಾರು ಮೊದಲು ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ನಿಯಂತ್ರಣ ತಪ್ಪಿ ಬಳಿಕ ಕ್ಯಾಂಟರ್ ವಾಹನಕ್ಕೆ ಡಿಕ್ಕಿ ಹೊಡೆದು ಸರಣಿ ಅಪಘಾತ ಸಂಭವಿಸಿದೆ ಎಂದು ತಿಳಿದುಬಂದಿದೆ. ಅಪಘಾತದಲ್ಲಿ ಕಾರಿನಲ್ಲಿದ್ದ ಆರು ಜನ ಹಾಗೂ ಬೈಕ್ ಸವಾರ ಸ್ಥಳದಲ್ಲಿಯೇ ಸಾವನ್ನಪ್ಪಿದ್ದಾರೆ. ಕ್ಯಾಂಟರ್ ವಾಹನ ಮುಗುಚಿ ಬಿದ್ದಿದ್ದು, ಚಾಲಕನಿಗೆ ತೀವ್ರ ಗಾಯಗಳಾಗಿವೆ. ಕಾರಿನಲ್ಲಿದ್ದವರು ಬೆಂಗಳೂರಿನ ಕೊತ್ತನೂರು ನಿವಾಸಿಗಳೆಂದು ತಿಳಿದು ಬಂದಿದೆ. ಮೃತದೇಹಗಳನ್ನು ಹೊಸಕೋಟೆಯ ಸರ್ಕಾರಿ ಆಸ್ಪತ್ರೆಗೆ ರವಾನಿಸಲಾಗಿದ್ದು, ಸ್ಥಳಕ್ಕೆ ಪೊಲೀಸ್ ಮಹಾ ನಿರೀಕ್ಷಕ ಲಾಭೂ ರಾಮ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

<><><><>

ಕೊಲಂಬೋದ ಆರ್. ಪ್ರೇಮದಾಸ್ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ದಿನದ ಮೊದಲ ಬಿ ಗುಂಪಿನ ಪಂದ್ಯದಲ್ಲಿ ಆಸ್ಟ್ರೇಲಿಯಾ ಮತ್ತು ಜಿಂಬಾಬ್ವೆ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಜಿಂಬಾಬ್ವೆ ತಂಡ ನಿಗದಿತ ೨೦ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೧೬೯ ರನ್ ಗಳಿಸಿ, ಆಸ್ಟ್ರೇಲಿಯಾಕ್ಕೆ ೧೭೦ ರನ್ ಗಳ ಗುರಿ ನೀಡಿದೆ.

<><><><>

ಥೈಲ್ಯಾಂಡ್‌ನ ಬ್ಯಾಂಕಾಕ್‌ನಲ್ಲಿ ಇಂದು ಆರಂಭವಾಗಲಿರುವ ೨೦೨೬ ರ ಮಹಿಳಾ ಏಷ್ಯಾ ಕಪ್ ರೈಸಿಂಗ್ ಸ್ಟಾರ್ಸ್‌ನಲ್ಲಿ ಭಾರತ ಎ ತಂಡ ಹಾಲಿ ಚಾಂಪಿಯನ್ ಆಗಿ ತನ್ನ ಅಭಿಯಾನವನ್ನು ಪ್ರಾರಂಭಿಸಲಿದೆ. ಈ ಹಿಂದೆ ಎಸಿಸಿ ಮಹಿಳಾ ಟಿ-೨೦ ಉದಯೋನ್ಮುಖ ತಂಡಗಳ ಏಷ್ಯಾ ಕಪ್ ಎಂದು ಕರೆಯಲ್ಪಡುತ್ತಿದ್ದ ಈ ಪಂದ್ಯಾವಳಿಯಲ್ಲಿ ಎಂಟು ತಂಡಗಳು ಭಾಗವಹಿಸಲಿದ್ದು, ಒಂದೇ ರೌಂಡ್-ರಾಬಿನ್ ಸ್ವರೂಪದಲ್ಲಿ ಆಡಲಾಗುತ್ತದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>